5 ವರದಿಯನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ (ಉಪಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ಸದ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ): ಮಾನ್ಯ ಸಭಾಧ್ಯಕ್ಷರೆ, ನಾನು 2013ನೇ ಸಾಲಿನ ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿಯ ಮೊದಲನೇ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು: ಒಪ್ಪಿಸಲಾಯಿತು.

ಅಧ್ಯಕ್ಷರು: ವಿಧೇಯಕಗಳನ್ನು ಮಂಡಿಸುವುದು.

6 ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

1. ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕ, 2013 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು): ಮಾನ್ಯ ಅಧ್ಯಕ್ಷರೆ, 2013ನೇ ಸಾಲಿನ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ

ಅಧ್ಯಕ್ಷರು: ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ

ಪ್ರಸ್ತಾವನೆ ಹೀಗಿದೆ:

2013ನೇ ಸಾಲಿನ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು

ಪ್ರಸ್ತಾವದ ಪರವಾಗಿರುವವರು **"ಹೌದು"** ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು **"ಇಲ್ಲ"** ಎಂದು ಸೂಚಿಸಬಹುದು.

ಪ್ರಸ್ತಾವವು **"ಹೌದು"** ಎನ್ನುವವರ ಪರವಾಗಿದೆ

ಪ್ರಸ್ತಾವವು **"ಹೌದು"** ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು): ಮಾನ್ಯ ಅಧ್ಯಕ್ಷರೆ, 2013ನೇ ಸಾಲಿನ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ

(ಅನುಬಂಧ–2)

2 ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2013

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೆ, 2013ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾಪನೆ ಮಂಡಿಸಲಾಯಿತು

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.